ದಿನಾಂಕಃ **16.03.2026** ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

ಮುಂದುವರೆದ ಪಾಟೀ ಸವಾಲುಃ ವಾದಿ ಪರ ಶ್ರೀ ಜಿಪಿ.ಎಂ.ವಕೀಲರಿಂದಃ

ನನ್ನ ತಂದೆಯ ಅಣ್ಣ ತಮ್ಮಂದಿರು ವಿಧ್ಯಾಭ್ಯಾಸ ಮಾಡಿಲ್ಲ ಎಂದರೆ ಸರಿ.ಅವರು ಅರ್ಜಿ ಸಲ್ಲಿಸಲು ಹೆಬ್ಬೆಟ್ಟಿನ ಗುರುತನ್ನು ಹಾಕುತ್ತಿದ್ದರು ಎಂದರೆ ಸರಿ. ಧಾನಪತ್ರಕ್ಕೆ ಯಲ್ಲಪ್ಪ ಸಹಿ ಮಾಡಿರುವುದಿಲ್ಲ ಎಂದು ಸೂಚಿಸುವುದು ಸರಿಯಲ್ಲ. ಧಾನಪತ್ರಕ್ಕೆ ಬೇರೆಯವರಿಂದ ಯಲ್ಲಪ್ಪ ಎಂದು ಸಹಿ ಮಾಡಿಸಿರುತ್ತೇವೆ ಎಂದು ಸೂಚಿಸುವುದು ಸರಿಯಲ್ಲ. ಯಲ್ಲಪ್ಪರವರಿಗೆ ಸಹಿ ಮಾಡಲು ಬರುತ್ತಿರಲಿಲ್ಲ ಎಂದು ಸೂಚಿಸುವುದು ಸರಿಯಲ್ಲ. ಸಾಕ್ಷಿ ಮುಂದುವರೆದು ರಾತ್ರಿ ಶಾಲೆಯಲ್ಲಿ ಓದಿಕೊಂಡಿದ್ದರು ಎಂದು ಉತ್ತರಿಸುತ್ತಾರೆ. ಧಾನಪತ್ರವನ್ನು ಹೊರತು ಪಡಿಸಿ ಯಲ್ಲಪ್ಪರವರ ಸಹಿ ಇರುವ ಯಾವುದೇ ದಾಖಲೆಯನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ವಾದಿಗಳಿಗೆ ದಾವಾ ಸ್ವತ್ತುಗಳಲ್ಲಿ ಭಾಗವನ್ನು ಕೊಡಬೇಕಾಗುತ್ತದೆ ಎಂದು ದಾಖಲೆಯನ್ನು ಸೃಷ್ಟಿಮಾಡಿಕೊಂಡು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ. ಯಲ್ಲಪ್ಪ ನನಗೆ ಯಾವುದೇ ಧಾನಪತ್ರವನ್ನು ಬರೆದುಕೊಟ್ಟಿರುವುದಿಲ್ಲ ಎಂದು ಸೂಚಿಸುವುದು ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯಾದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಸಹಿ/-

(ಶ್ರೀ ಅಮರನಾಥ ಬಿ.ಎನ್)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಮಧುಗಿರಿ